ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

DTE-ADMI0ACM2/ 97 /2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:31-08-2021.

**-:: ಸು ತ್ತೋಲೆ::-**

ವಿಷಯ: 2021-22ನೇ ಸಾಲಿನ ಡಿಪ್ಲೋಮಾ ಪ್ರವೇಶ - ಖಾಸಗಿ ಪಾಲಿಟೆಕ್ನಿಕ್‌ಗಳಿಗೆ ಪ್ರವೇಶಾವಧಿಯನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಪ್ರವೇಶಾಧಿಸೂಚನೆಯ ದಿ:12-08-2021.

-0000000-

2021-22ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿನ ಪ್ರವೇಶಕ್ಕೆ ಅಂತಿಮ ದಿನಾಂಕ:31-08-2021 ಎಂದು ಉಲ್ಲೇಖಿತ ಈ ಕಛೇರಿಯ ಪ್ರವೇಶಾಧಿಸೂಚನೆಯಲ್ಲಿ ನಿಗಧಿಪಡಿಸಲಾಗಿತ್ತು.

ಆದರೆ, ಪ್ರವೇಶ ಅವಧಿಯನ್ನು ವಿಸ್ತರಿಸಲು ಪಾಲಿಟೆಕ್ನಿಕ್‌ನ ಪ್ರಾಂಶುಪಾಲರುಗಳು ಕೋರಿರುವುದನ್ನು ಪರಿಗಣಿಸಿ ಒಟ್ಟಾರೆ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಪ್ರವೇಶಾವಧಿಯನ್ನು **ದಿ:20-09-2021 ರವರೆಗೆ ವಿಸ್ತರಿಸಿ** ಅನುಮತಿ ನೀಡಲಾಗಿದೆ.

ಪ್ರಾಂಶುಪಾಲರು ಕೂಡಲೇ ಈ ಬಗ್ಗೆ ಕ್ರಮ ತೆಗೆದುಕೊಂಡು ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಪ್ರಯುಕ್ತ, ಇದನ್ನು ಖಾಸಗಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. *ಕೋವಿಡ್-19 ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.*

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್: **http://dtek.karnataka.gov.in** ನ್ನು ನೋಡುವುದು.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

*ಇವರಿಗೆ,*
*ಎಲ್ಲಾ ಖಾಸಗಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ - ಮಾಹಿತಿಗಾಗಿ ಮತ್ತು ಸೂಕ್ತ ಅನುಸರಣೆಗಾಗಿ*

ಪ್ರತಿ ಇವರಿಗೆ ಮಾಹಿತಿಗಾಗಿ:

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಕಾರ್ಯದರ್ಶಿಯವರ ಆಪ್ತಶಾಖೆಗೆ.
4. ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ.
5. ಇ-ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಡಿವಿಪಿ(2) ವಿಭಾಗಕ್ಕೆ
7. ಇಆರ್‌ಎಸ್(3) ವಿಭಾಗಕ್ಕೆ.
8. ಕಛೇರಿ ಪ್ರತಿ.

Scanned with CamScanner